ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 289
ಸದಸ್ಯರ ಹೆಸರು ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕಃ 03-02-2021
ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಇಲಾಖೆ

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಪ್ರಮುಖ ರಾಜ್ಯ ಹೆದ್ದಾರಿ ಮೈಸೂರು-ಹೆಗ್ಗಡದೇವನಕೋಟೆ ರಸ್ತೆಯಲ್ಲಿ ವಾಹನ ಸಂಚಾರ ಅಧಿಕವಾಗಿದ್ದು, ಇದನ್ನು ಚತುಷ್ಪಥ ರಸ್ತೆಯನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;	ಪ್ರಸಕ್ತ ಸಾಲಿನಲ್ಲಿ ಕೋವಿಡ್-19 ಪೆಂಡಾಮಿಕ್ ಖಾಯಿಲೆಯಿಂದ ರಾಜ್ಯದ ಅಭಿವೃದ್ಧಿ ಕುಂಠಿತಗೊಂಡು ಆರ್ಥಿಕ ಸಂಪನ್ಮೂಲಗಳ ಸಂಗ್ರಹಣೆ ಕೊರತೆ ಉಂಟಾಗಿರುತ್ತದೆ. ಅಲ್ಲದೆ ಇಲಾಖೆಗೆ ಹಂಚಿಕೆ ಮಾಡಿರುವ ಅನುದಾನವು ಪ್ರಗತಿಯಲ್ಲಿರುವ ಹಾಗೂ ಮುಂದುವರೆದ ಕಾಮಗಾರಿಗಳಿಗೆ ಕೊರತೆಯಿರುವುದರಿಂದ ಪ್ರಸಕ್ತ ಸಾಲಿನಲ್ಲಿ ಮೈಸೂರು-ಹೆಗ್ಗಡದೇವನಕೋಟೆ ರಾಜ್ಯ ಹೆದ್ದಾರಿ-33 ನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ.
ಆ)	ಸದರಿ ರಸ್ತೆ ಕಿರಿದಾಗಿದ್ದು, ತಿರುವುಗಳಿಂದ ಕೂಡಿದ್ದು, ಸಂಚಾರ ಒತ್ತಡ ಹೆಚ್ಚಾಗಿ ವಾಹನಗಳ ಸುಗಮ ಸಂಚಾರಕ್ಕೆ ತೊಂದರೆಯಾಗಿರುವುದು ಅಲ್ಲದೆ ಅಪಘಾತಗಳು ಹೆಚ್ಚಾಗಿ ಸಂಭವಿಸುತ್ತಿರುವುದರಿಂದ ಈ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ?	

ಲೋಇ 13 ಸಿಕ್ಯೂಎನ್ 2021(ಇ)

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು,
ಲೋಕೋಪಯೋಗಿ ಇಲಾಖೆ